(ಸದನವು ರಾತ್ರಿ 7.02 ಗಂಟೆಗೆ ಮುಂದೂಡಲ್ಪಟ್ಟು ಪುನಃ ದಿನಾಂಕ 5ನೇ ಆಗಸ್ಟ್ 2004ರಂದು ಬೆಳಿಗ್ಗೆ 9 ಗಂಟೆಗೆ ಸಮಾವೇಶಗೊಳ್ಳಲು ನಿಶ್ಚಯಿಸಿತು)

ಅನುಬಂಧ-I

ದಿನಾಂಕ 28-7-2004ರ ಚುಕ್ಕೆಗುರುತಿಲ್ಲದ ಪ್ರಶ್ನೋತ್ತರಗಳು.

451(615) ಶ್ರೀ ಅಂಗಾರ ಎಸ್. (ಸುಳ್ಯ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಸುಳ್ಯ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಪುತ್ತೂರು ತಾಲ್ಲೂಕಿನ ಕ್ಯೂಲ ಕೆ.ಸಿ. ಫಾರ್ಮನ್ನು ಕೃಷಿ ವಿಶ್ವವಿದ್ಯಾಲಯವನ್ನಾಗಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ಇದ್ದಲ್ಲಿ ಎಷ್ಟು ಸಮಯದಲ್ಲಿ ಮಾಡಲಾಗುವುದು?

ಶ್ರೀ ಕೆ. ಶ್ರೀನಿವಾಸಗೌಡ (ಕೃಷಿ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

452(616) ಶ್ರೀ ಅಂಗಾರ ಎಸ್. (ಸುಳ್ಯ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಡಾ॥ ಶಿವರಾಮ ಕಾರಂತ ಪ್ರಥಮದರ್ಜೆ ಕಾಲೇಜು, ಬೆಳ್ಳಾರೆ ಸುಳ್ಯ ಇಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯ ಕೊಠಡಿಗಳು ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಹಾಗೂ ಕೊಠಡಿಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) 2004-05ನೇ ಸಾಲಿನಲ್ಲಿ ಒದಗಿಸಲಾಗಿರುವ ಮೊತ್ತದಲ್ಲಿ ಈ ಕಾಲೇಜಿಗೆ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.

454(621) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಪಶುಪಾಲನೆ, ಮೀನುಗಾರಿಕೆ ವಿಶ್ವವಿದ್ಯಾನಿಲಯ ಸ್ಥಾಪನೆಯ ಪ್ರಸ್ತಾವ ಸರ್ಕಾರದ ಮುಂದಿದೆಯೇ?

ಆ) ಇದ್ದಲ್ಲಿ, ಯಾವಾಗ ಮತ್ತು ವಿಶ್ವವಿದ್ಯಾನಿಲಯಗಳು ಎಲ್ಲಿ ಆರಂಭಿಸಲಾಗುವುದು ಹಾಗೂ ವಿಳಂಬವಾಗಲು ಕಾರಣವೇನು?

ಇ) ಇದಕ್ಕೆ ಬೇಕಾದ ಸ್ಥಳಕ್ಕಾಗಿ ಎಷ್ಟು ಎಕರೆ ಜಾಗ ಗುರುತಿಸಲಾಗಿದೆ?

ಈ) ಸಂಪನ್ಮೂಲ ಕ್ರೋಢೀಕರಣ ಹಾಗೂ ನಿಗದಿಪಡಿಸಿರುವ ಮೊತ್ತವೆಷ್ಟು?

ಉ) ಇದನ್ನು ಖರ್ಚು ಮಾಡಲಾಗಿದೆಯೇ ಅಥವಾ ಇಲ್ಲವೇ?